# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಡಾ:ರಾಧಾಕೃಷ್ಣರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಳ್ಳಾರಿ ಮತ್ತು ಶ್ರೀ ಡಿ. ವೆಂಕಟರಮಣ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಳ್ಳಾರಿ. ಹಾಗೂ ಶ್ರೀ ಜಾಕೀರ್ ಹುಸೇನ್, ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ), ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಳ್ಳಾರಿ. ಇವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಕಾತಿ ಮಾಡುವ ಬಗ್ಗೆ.

**ಓದಲಾಗಿದೆ:**
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ರವರ ಪತ್ರ ಸಂಖ್ಯೆ:ಜಿಪಂಬ:ಸಿಬ್ಬಂದಿ-4:ಸಿಸಿಎ-15/2012-13 ದಿನಾಂಕ:18-09-2012
2. ಸರ್ಕಾರದ ಕಾರಣ ಕೇಳುವ ನೋಟೀಸು ದಿ:06-02-2013.
3. ಡಾ:ರಾಧಾಕೃಷ್ಣರೆಡ್ಡಿ, ಶ್ರೀ ಡಿ. ವೆಂಕಟರಮಣ, ಹಾಗೂ ಶ್ರೀ ಜಾಕೀರ್ ಹುಸೇನ್.ಇವರ ಲಿಖಿತ ಹೇಳಿಕೆ ದಿ:25-03-2013, 25-02-2013 ಮತ್ತು ದಿನಾಂಕ:23- 02-2013

------

**ಪ್ರಸ್ತಾವನೆ:**

ಬಳ್ಳಾರಿ ತಾಲೂಕು ಎಂ. ಗೋನಾಳ ಗ್ರಾಮ ಪಂಚಾಯತಿಯಲ್ಲಿ ಎಂಜಿಎನ್‌ಆರ್‌ಇಜಿಎ ಯೋಜನೆಯಡಿ 2010-11ನೇ ಸಾಲಿನಲ್ಲಿ ಒಂದೇ ಚೈನೇಜ್ ಇರುವ ರಸ್ತೆಯನ್ನು ಎರಡು ಕಾಮಗಾರಿಗಳನ್ನಾಗಿ ವಿಭಜಿಸಿ ಎರಡು ಪ್ರತ್ಯೇಕವಾದ ಅಂದಾಜು ಪಟ್ಟಿಗಳನ್ನು ತಯಾರಿಸಿ ಸರ್ಕಾರದ ಹಣ ದುರುಪಯೋಗಪಡಿಸಿಕೊಂಡಿರುವ ಆರೋಪದ ಮೇಲೆ ಈ ಕೆಳಕಂಡ ಅಧಿಕಾರಿ/ನೌಕರರುಗಳಾದ :

1) ಡಾ:ರಾಧಾಕೃಷ್ಣರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಳ್ಳಾರಿ
2) ಶ್ರೀ ಡಿ. ವೆಂಕಟರಮಣ, ಹಿಂದಿನ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಳ್ಳಾರಿ.
3) ಶ್ರೀ ಜಾಕೀರ್ ಹುಸೇನ್, ಹಿಂದಿನ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಳ್ಳಾರಿ.

ಇವರುಗಳಿಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) 1957ರ ನಿಯಮ 11ರಡಿ ಶಿಸ್ತು ಕ್ರಮ ಜರುಗಿಸಲು ಮೇಲೆ ಕ್ರಮಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 06-02-2013ರ ಸರ್ಕಾರದ ನೋಟೀಸ್‌ನಲ್ಲಿ ಅನುಬಂಧ-1 ರಿಂದ 4ನ್ನು ಒಳಗೊಂಡ ದೋಷಾರೋಪಣಾ ಪಟ್ಟಿಯೊಂದಿಗೆ ಕಾರಣ ಕೇಳುವ ನೋಟೀಸ್‌ನ್ನು ಜಾರಿಮಾಡಲಾಗಿತ್ತು. ಸದರಿ ನೋಟೀಸಿಗೆ ಅಪಾದಿತ ಅಧಿಕಾರಿಗಳು ಮೇಲೆ ಓದಲಾದ ಕ್ರಮಸಂಖ್ಯೆ (3) ರಲ್ಲಿ ಲಿಖಿತ ಹೇಳಿಕೆಗಳನ್ನು ಸಲ್ಲಿಸಿ ಅವರ ವಿರುದ್ಧದ ಆರೋಪವನ್ನು ನಿರಾಕರಿಸಿ ಆರೋಪಗಳನ್ನು ಕೈಬಿಡಲು ಕೋರಿರುತ್ತಾರೆ. ಆರೋಪಿತ ಅಧಿಕಾರಿಗಳು ಸಲ್ಲಿಸಿರುವ ವಿವರಣೆಯು ಸಮರ್ಥನೀಯವಾಗಿರುವುದಿಲ್ಲವಾದ್ದರಿಂದ ಸದರಿ ಅಧಿಕಾರಿಗಳ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಜಂಟಿ ಇಲಾಖಾ ವಿಚಾರಣೆಯನ್ನು ಜರುಗಿಸಲು ಸರ್ಕಾರವು ನಿರ್ಧರಿಸಿ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 179 ವಿಸೇಜಿ 2012 ಬೆಂಗಳೂರು, ದಿನಾಂಕ:21-01-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಡಾ:ರಾಧಾಕೃಷ್ಣರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಳ್ಳಾರಿ, ಶ್ರೀ ಡಿ. ವೆಂಕಟರಮಣ, ಹಿಂದಿನ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಳ್ಳಾರಿ.

ಶ್ರೀ ಜಾಕೀರ್ ಹುಸೇನ್, ಹಿಂದಿನ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಳ್ಳಾರಿ, ಇವರುಗಳ ವಿರುದ್ಧ ಮಾಡಿರುವ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು, ಕರ್ನಾಟಕ ನಾಗರೀಕ ಸೇವಾ(ವನಿಮೇ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣಾ ನಡೆಸಲು ಸದರಿ ನಿಯಮಾವಳಿಗಳ ನಿಯಮ 13ರ ಅಡಿಯಲ್ಲಿ ಜಂಟಿ ಇಲಾಖಾ ವಿಚಾರಣೆಗೆ ಆದೇಶಿಸಿದೆ.

ಈ ಇಲಾಖಾ ವಿಚಾರಣೆ ನಡೆಸಲು ಶ್ರೀ ಫ.ಸಿ. ಗುಡ್ಡಾಕಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಧಾರವಾಡ, ಇವರನ್ನು ವಿಚಾರಣಾಧಿಕಾರಿಯಾಗಿ ಮತ್ತು ಸಹಾಯಕ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯತಿ, ಬಳ್ಳಾರಿ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕನಾಸೇ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ವಿಚಾರಣೆ ಜರುಗಿಸಿ ವರದಿಯನ್ನು ನಾಲ್ಕು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗದಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರು ವಿಚಾರಣಾಧಿಕಾರಿಯವರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ.
3. ಶ್ರೀ ಪ.ಸಿ. ಗುಡ್ಡಾಕಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಗಣಪತಿ ಗುಡಿ ಹತ್ತಿರ, ಸಂಗೊಳ್ಳಿ ರಾಯಣ್ಣ ನಗರ, ಧಾರವಾಡ, (ವಿಚಾರಣಾಧಿಕಾರಿ) (ಫೋನ ನಂ. 2468793)
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ(ಅಭಿವೃದ್ಧಿ) ಬಳ್ಳಾರಿ(ಮಂಡನಾಧಿಕಾರಿ).
5. ಸಂಬಂಧಿಸಿದ ಅಧಿಕಾರಿಗಳಿಗೆ.( ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಮುಖಾಂತರ)

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) /ಅಪರ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.

GOs